## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ಸಹಾಯಧನ ಬಿಡುಗಡೆ ಕುರಿತು

**ಪ್ರಸ್ತಾವನೆ :**

2012-13ನೇ ಸಾಲಿಗೆ ಸಂಬಂಧಿಸಿದಂತೆ ಕೇಂದ್ರ ಪುರಸ್ಕೃತ ಕಾರ್ಯಕ್ರಮವಾದ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ಆಯವ್ಯಯದ **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ಒದಗಿಸಲಾದ ಕೇಂದ್ರ ಹಾಗೂ ರಾಜ್ಯ ಪಾಲಿನ ಪಾಲಿನ ಅನುದಾನ ಸೇರಿದಂತೆ ಒಟ್ಟಾರೆ ₹ 1495.20 ಲಕ್ಷಗಳಲ್ಲಿ ಈಗಾಗಲೇ ₹ 1050.49 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಇನ್ನುಳಿದ ₹ 444.71 ಲಕ್ಷಗಳ ಪೈಕಿ ₹ 83.60 ಲಕ್ಷಗಳನ್ನು ಕಾರ್ಯಕ್ರಮದ ಪ್ರಗತಿ ಹಾಗೂ ಹಂಚಿಕೆ ಮಾಡಿಕೊಳ್ಳಲಾದ ಅನುದಾನಕ್ಕೆ ಮಿತಿಗೊಳಿಸಿ ರಾಜ್ಯ ಸಹಾಯಧನವನ್ನು ಪಾವತಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 46 ಜೈಅಯೋ 2012, ಬೆಂಗಳೂರು, ದಿನಾಂಕ 27.03.2013**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2012-13ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಪಾವತಿಗಾಗಿ ₹ 83.60 ಲಕ್ಷಗಳನ್ನು (ರೂ. ಎಂಬತ್ಮೂರು ಲಕ್ಷದ ಅರವತ್ತು ಸಾವಿರಗಳು ಮಾತ್ರ) **ಲೆಕ್ಕ ಶೀರ್ಷಿಕೆ 2810-60-196-6-01ರಡಿ (ಯೋಜನೆ)ಯಡಿ** ಈ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆಯಾದ ಅನುದಾನ ( ರೂ.ಲಕ್ಷಗಳಲ್ಲಿ) |
|---|---|---|
| 1 | ಬಾಗಲಕೋಟೆ | 2.22 |
| 2 | ಬೆಳಗಾಂ | 42.82 |
| 3 | ಬಿಜಾಪುರ | 0.68 |
| 4 | ಚಿತ್ರದುರ್ಗ | 0.77 |
| 5 | ದಕ್ಷಿಣ ಕನ್ನಡ | 2.22 |
| 6 | ದಾವಣಗೆರೆ | 4.25 |
| 7 | ಧಾರವಾಢ | 1.26 |
| 8 | ಹಾಸನ | 3.51 |
| 9 | ಹಾವೇರಿ | 2.08 |
| 10 | ಕೊಡಗು | 0.91 |
| 11 | ಶಿವಮೊಗ್ಗ | 22.00 |
| 12 | ಉತ್ತರ ಕನ್ನಡ | 0.88 |
| ಒಟ್ಟು | | **83.60** |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನವನ್ನು ಪಾವತಿಸಲು ಮಾತ್ರ ವಿನಿಯೋಗಿಸತಕ್ಕದ್ದು.

ಬಿಡುಗಡೆ ಮಾಡಿದ ಅನುದಾನವನ್ನು **ಲೆಕ್ಕ ಶೀರ್ಷಿಕೆ 2810-60-196-6-01ರಡಿ(ಯೋಜನೆ)** ವೆಚ್ಚ ಭರಿಸತಕ್ಕದ್ದು. ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 152 ಪಿಬಿಎಸ್ 2013 ದಿನಾಂಕ 25.03.2013 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಎಂ.ದೀಪಾ) 28/3/13
ನಿರ್ದೇಶಕರು(ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾಂ, ಬಿಜಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಹಾಸನ, ಹಾವೇರಿ, ಕೊಡಗು, ಶಿವಮೊಗ್ಗ, ಉತ್ತರಕನ್ನಡ
3. ಉಪಕಾರ್ಯದರ್ಶಿ(ಅಭಿವೃದ್ಧಿ)/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾಂ, ಬಿಜಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಹಾಸನ, ಹಾವೇರಿ, ಕೊಡಗು, ಶಿವಮೊಗ್ಗ, ಉತ್ತರಕನ್ನಡ
4. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
5. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ಬೆಳಗಾಂ, ಬಿಜಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಹಾಸನ, ಹಾವೇರಿ, ಕೊಡಗು, ಶಿವಮೊಗ್ಗ, ಉತ್ತರಕನ್ನಡ
6. ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
7. ಖಜಾನೆಗಳ ಉಪನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು
8. ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ:49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜಭವನ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
10. ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ